## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಯಲಹಂಕ ವಲಯದ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ. 9 ವಿದ್ಯಾರಣ್ಯಪುರ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮಾನ್ಯ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ"ಯಡಿ ರೂ.15.00 ಕೋಟಿಗಳ ಹೆಚ್ಚುವರಿ ಅನುದಾನ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022.
2. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 25-02-2022 (5).
3. ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪತ್ರ ಸಂಖ್ಯೆ: ಬಿಬಿಎಂಪಿ/ ಮುಅ/ಪಿ.ಆರ್(G)/4249/2021-22, ದಿನಾಂಕ: 01-02-2022.
4. ಸರ್ಕಾರದ ಸಮಸಂಖ್ಯೆಯ ಪತ್ರ ದಿನಾಂಕ: 19-02-2022.
5. ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪತ್ರ ಸಂಖ್ಯೆ: ಬಿಬಿಎಂಪಿ/ ಮುಅ/ಪಿ.ಆರ್(ಜಿ)/4863/2021-22, ದಿನಾಂಕ: 10-03-2022.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 21-04-2022 ರಂದು ನಡೆದ ಸಭೆ.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ: 14-01-2022ರ ಆದೇಶದಲ್ಲಿ, ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಸಂದರ್ಭದಲ್ಲಿ ಘೋಷಿಸಿದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ರೂ.6000.00 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸರ್ಕಾರದ ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ದಿನಾಂಕ: 25-02-2022 (5) ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022 ರಂತೆ ಅನುಮೋದಿಸಲಾಗಿರುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸಂಬಂಧಿಸಿದಂತೆ ಬ್ಯಾಟರಾಯನಪುರ ವಿಧಾನ ಸಭಾ ಕ್ಷೇತ್ರಕ್ಕೆ ರೂ.75.00 ಕೋಟಿಗಳ ಅನುದಾನವನ್ನು ನಿಗಧಿಗೊಳಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ: (3) ರಲ್ಲಿ ಓದಲಾದ ದಿನಾಂಕ: 01-02-2022ರ ಪತ್ರದಲ್ಲಿ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಶ್ರೀ ರವಿ, ಅಧ್ಯಕ್ಷರು, ಬೆಂಗಳೂರು ಅಂತರಾಷ್ಟ್ರೀಯ

. . .2/-

ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ರವರು ದಿನಾಂಕ: 11-10-2021ರ ಮನವಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವಾರ್ಡ್-09 ವಿದ್ಯಾರಣ್ಯಪುರ, ಪಾಲಿಕೆಗೆ ಹೊಸದಾಗಿ ಸೇರ್ಪಡೆಗೊಂಡ ವಾರ್ಡ್ ಪ್ರದೇಶವಾಗಿದ್ದು, ಸದರಿ ವಾರ್ಡ್ ವ್ಯಾಪ್ತಿಯ ಹೆಚ್.ಎಂ.ಟಿ ಬಡಾವಣೆ, ಬಿ.ಇ.ಎಲ್ ಬಡಾವಣೆ, ಎನ್.ಐ.ಟಿ ಬಡಾವಣೆ, ಕೆನರಾ ಬ್ಯಾಂಕ್ ಬಡಾವಣೆ, ಆನಂದ ಬಡಾವಣೆ, ತಿಂಡ್ಲು, ವಿರೂಪಾಕ್ಷಪುರ, ಸರ್ ಎಂ.ವಿ. ಬಡಾವಣೆ, ಪಾರ್ವತಮ್ಮ ಬಡಾವಣೆ, ಟೆಲಿಕಾಂ ಬಡಾವಣೆ, ಗಣೇಶನಗರ, ದುರ್ಗಾ ಬಡಾವಣೆ, ಬಸವ ಸಮಿತಿ ಬಡಾವಣೆಗಳು ತಗ್ಗು ಪ್ರದೇಶಗಳಲ್ಲಿದ್ದು, ಮಳೆಗಾಲದಲ್ಲಿ ಮಳೆ ನೀರು ಮನೆಗಳಿಗೆ ನುಗ್ಗಿ ಸಾರ್ವಜನಿಕರ ಆಸ್ತಿಪಾಸ್ತಿಗೆ ಸಾಕಷ್ಟು ತೊಂದರೆಯುಂಟಾಗಿದ್ದು ಹಾಗೂ ಈ ಬಡಾವಣೆಯಲ್ಲಿನ ಚರಂಡಿಗಳು ಶಿಥಿಲಗೊಂಡಿದ್ದು, ಹೊಸದಾಗಿ ಚರಂಡಿ ನಿರ್ಮಿಸುವ ಅವಶ್ಯಕತೆ ಇರುವುದಾಗಿ ದಿನಾಂಕ: 11-10-2021ರ ಮನವಿಯಲ್ಲಿ ರೂ.1500.00 ಲಕ್ಷಗಳ ಮಂಜೂರು ಮಾಡುವಂತೆ ಮನವಿ ಮಾಡಿದ್ದು, ಅದರಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ ಹಾಗೂ ಕಾರ್ಯಪಾಲಕ ಅಭಿಯಂತರರು ಬ್ಯಾಟರಾಯನಪುರ ವಿಭಾಗ ರವರು ಈ ಕೆಳಕಂಡಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆಂದು ತಿಳಿಸಿರುತ್ತಾರೆ. ಸದರಿ ಕಾಮಗಾರಿಗಳಿಗೆ ಸಾರ್ವಜನಿಕ ಹಿತದೃಷ್ಟಿಯಿಂದ ಸರ್ಕಾರದ ಅನುದಾನ ಮಂಜೂರು ಮಾಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

| ಕ್ರ.ಸಂ | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1) | Improvements to Road and Drains at HMT Layout, BEL Layout and surrounding area in ward no.09 (Vidyaranyapura) | 100.00 |
| 2) | Improvements to Road and Drains at Thindlu, Virupakshapura and surrounding area in ward no.09 (Vidyaranyapura) | 100.00 |
| 3) | Improvements to Road and Drains at Canara Bank layout, ananda layout and surrounding area in ward no.09 (Vidyaranyapura) | 100.00 |
| 4) | Improvements to Road and Drains at Sir M.V. layout, Parwathamma layout and surrounding area in ward No.09 (Vidyaranyapura | 100.00 |
| 5) | Improvements to Road and Drains at Telecom Layout, Ganeshnagara and surrounding area in ward No.09 (Vidyaranyapura) | 100.00 |

. . .3/-

| | | |
|---|---|---|
| 6) | Improvements to Road and Drains at HMT layout 1st Block, 2nd Block and surrounding area in ward No.09 (Vidyaranyapura) | 100.00 |
| 7) | Improvements to Road and Drains at BEL layout, 1st, 3rd block and surrounding area in ward no.09 (Vidyaranyapura) | 100.00 |
| 8) | Improvements to Road and Drains at BEL Layout 4th, 5th block and surrounding area in warf no. 09 (Vidyaranyapura) | 100.00 |
| 9) | Improvements to Road and Drains at HMT Layout 3rd, 4th, 5th Block and surrounding area in ward no.09 (Vidyaranyapura) | 200.00 |
| 10) | Improvements to Road and Drains at Durga Layout Sapthagiri layout and surrounding are in ward no.09 (Vidyaranyapura) | 100.00 |
| 11) | Improvements to Road and Drains at Thindlu and surrounding area in ward no.09 (Vidyaranyapura) | 100.00 |
| 12) | Improvements to Road and Drains at Virupakshapura and surrounding area in ward no.09 (Vidyaranyapura) | 100.0 |
| 13) | Improvements to Road and Drains at NTI layout, IECHS layout, Basavasamithi layout and surrounding area in ward no.09 (Vidyaranyapura) | 100.00 |
| 14) | Improvements to Road and Drains at Defence layout and surroundings area in ward no.09 (Vidyaranyapura) | 100.00 |
| | **Total** | **1500.00** |

ಮೇಲೆ ಕ್ರಮ ಸಂಖ್ಯೆ: (4) ರಲ್ಲಿ ಓದಲಾದ ದಿನಾಂಕ: 19-02-2022ರ ಸರ್ಕಾರದ ಪತ್ರದಲ್ಲಿ, ಕೆಲವು ಅಂಶಗಳಿಗೆ ಮಾಹಿತಿ / ಸ್ಪಷ್ಟೀಕರಣವನ್ನು ನೀಡುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರನ್ನು ಕೋರಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ: (5) ರಲ್ಲಿ ಓದಲಾದ ದಿನಾಂಕ: 10-03-2022ರ ಪತ್ರದಲ್ಲಿ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ದಿನಾಂಕ: 19-02-2022ರ ಸರ್ಕಾರದ ಪತ್ರದಲ್ಲಿ ಕೋರಲಾದ 03 ಅಂಶಗಳಿಗೆ ಸ್ಪಷ್ಟೀಕರಣ ನೀಡಿರುತ್ತಾರೆ. ಪ್ರಸ್ತುತ ಸಲ್ಲಿಕೆಯಾಗಿರುವ ಪ್ರಸ್ತಾವನೆಯಲ್ಲಿನ ಕಾಮಗಾರಿಗಳು 2019 ರಲ್ಲಿ ಅನುಮೋದನೆಯಾಗಿರುವ ನವ ನಗರೋತ್ಥಾನ ಕ್ರಿಯಾ

. . .4/-

ಯೋಜನೆಯಲ್ಲಿ ಸೇರಿರುವುದಿಲ್ಲ ಮತ್ತು ಈ ಯೋಜನೆಯ ಕಾಮಗಾರಿಗಳ ಉಳಿತಾಯದ ಮೊತ್ತದಿಂದ ಪ್ರಸ್ತುತ ಕಾಮಗಾರಿಗಳನ್ನು ಹೊಸದಾಗಿ ಅನುಷ್ಠಾನಗೊಳಿಸಲು ಉದ್ದೇಶಿಸಿದ್ದು, ಪಾಲಿಕೆಯಲ್ಲಿ ಹಣಕಾಸಿನ ಕೊರತೆ ಇರುವುದರಿಂದ ಮತ್ತು ಸದರಿ ಕಾಮಗಾರಿಗಳನ್ನು ಸಾರ್ವಜನಿಕ ಹಿತದೃಷ್ಠಿಯಿಂದ ಕೂಡಲೇ ಕೈಗೆತ್ತಿಕೊಳ್ಳುವ ಅವಶ್ಯಕತೆ ಇರುವುದರಿಂದ ಕಾಮಗಾರಿಗಳಿಗೆ ತಗಲುವ ರೂ.1500.00 ಲಕ್ಷಗಳ ಅನುದಾನವನ್ನು ಸರ್ಕಾರದಿಂದ ಮಂಜೂರು ಮಾಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ: (6) ರಲ್ಲಿ ಓದಲಾದ ದಿನಾಂಕ: 21-04-2022ರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ" ಯಡಿ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಕ್ಕೆ ನಿಗಧಿಯಾಗಿರುವ ಅನುದಾನಕ್ಕೆ ಸಂಬಂಧಿಸಿದಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ಇವರು ಸಲ್ಲಿಸಿರುವ ಕ್ರಿಯಾ ಯೋಜನೆಯನ್ನು ಅಂತಿಮಗೊಳಿಸುವ ಬಗ್ಗೆ ನಡೆದ ಸಭೆಯಲ್ಲಿ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ.9 ಮತ್ತು 11ರ ವ್ಯಾಪ್ತಿಯಲ್ಲಿ ಬರುವ ವಿವಿಧ ರಸ್ತೆ ಮತ್ತು ಚರಂಡಿಗಳ ಅಭಿವೃದ್ಧಿ ಕೈಗೊಳ್ಳಲು ಪ್ರಸ್ತುತ ನಿಗಧಿಪಡಿಸಿರುವ ರೂ.75.00 ಕೋಟಿಗಳ ಅನುದಾನವನ್ನು ಹೊರತುಪಡಿಸಿ, ಹೆಚ್ಚುವರಿಯಾಗಿ ರೂ.25.00 ಕೋಟಿಗಳನ್ನು "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ"ಯಡಿ ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆ / ಆದೇಶಕ್ಕೆ ಕಡತ ಸಲ್ಲಿಸಲು ತೀರ್ಮಾನಿಸಲಾಗಿರುತ್ತದೆ. ಅದರಂತೆ, ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆ ಪಡೆಯಲಾಗಿರುತ್ತದೆ.

ಬಿಬಿಎಂಪಿ ಮುಖ್ಯ ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 53 ಎಂಎನ್‌ವೈ 2022 (ಇ),**
**ಬೆಂಗಳೂರು, ದಿನಾಂಕ: 24-05-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಕ್ಕೆ ಅಮೃತ ನಗರೋತ್ಥಾನ ಕ್ರಿಯಾಯೋಜನೆಯಡಿ ಪ್ರಸ್ತುತ ನಿಗದಿಪಡಿಸಿರುವ ರೂ.75.00 ಕೋಟಿಗಳ ಅನುದಾನವನ್ನು ಹೊರತುಪಡಿಸಿ, ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ವಾರ್ಡ್ ನಂ. 09, ವಿದ್ಯಾರಣ್ಯಪುರ, ಹೆಚ್.ಎಂ.ಟಿ ಬಡಾವಣೆ, ಬಿ.ಇ.ಎಲ್ ಬಡಾವಣೆ, ಎನ್.ಐ.ಟಿ ಬಡಾವಣೆ, ಕೆನರಾ ಬ್ಯಾಂಕ್ ಬಡಾವಣೆ, ಆನಂದ ಬಡಾವಣೆ, ತಿಂಡ್ಲು, ವಿದ್ಯಾರಣ್ಯಪುರ ಸರ್.ಎಂ.ವಿ ಬಡಾವಣೆ, ಪಾರ್ವತಮ್ಮ ಬಡಾವಣೆ, ಟೆಲಿಕಾಂ ಬಡಾವಣೆ, ಗಣೇಶ ನಗರ ದುರ್ಗಾ ಬಡಾವಣೆ, ಬಸವ ಸಮಿತಿ ಬಡಾವಣೆಗಳ ವ್ಯಾಪ್ತಿಯಲ್ಲಿ ಬರುವ ವಿವಿಧ ರಸ್ತೆ ಮತ್ತು ಚರಂಡಿಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಈ ಕೆಳಕಂಡ ಕಾಮಗಾರಿಗಳಿಗೆ ಹೆಚ್ಚುವರಿಯಾಗಿ ರೂ.15.00 ಕೋಟಿಗಳನ್ನು "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ" ಯಡಿ ಒದಗಿಸಲು

. . .5/-

ಹಾಗೂ ಸದರಿ ಕಾಮಗಾರಿಗಳ ಕ್ರಿಯಾಯೋಜನೆಗೆ ಈ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

| ಕ್ರ.ಸಂ | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1) | Improvements to Road and Drains at HMT Layout, BEL Layout and surrounding area in ward no.09 (Vidyaranyapura) | 100.00 |
| 2) | Improvements to Road and Drains at Thindlu, Virupakshapura and surrounding area in ward no.09 (Vidyaranyapura) | 100.00 |
| 3) | Improvements to Road and Drains at Canara Bank layout, ananda layout and surrounding area in ward no.09 (Vidyaranyapura) | 100.00 |
| 4) | Improvements to Road and Drains at Sir M.V. layout, Parwathamma layout and surrounding area in ward No.09 (Vidyaranyapura | 100.00 |
| 5) | Improvements to Road and Drains at Telecom Layout, Ganeshnagara and surrounding area in ward No.09 (Vidyaranyapura) | 100.00 |
| 6) | Improvements to Road and Drains at HMT layout 1st Block, 2nd Block and surrounding area in ward No.09 (Vidyaranyapura) | 100.00 |
| 7) | Improvements to Road and Drains at BEL layout, 1st, 3rd block and surrounding area in ward no.09 (Vidyaranyapura) | 100.00 |
| 8) | Improvements to Road and Drains at BEL Layout 4th, 5th block and surrounding area in warf no. 09 (Vidyaranyapura) | 100.00 |
| 9) | Improvements to Road and Drains at HMT Layout 3rd, 4th, 5th Block and surrounding area in ward no.09 (Vidyaranyapura) | 200.00 |
| 10) | Improvements to Road and Drains at Durga Layout Sapthagiri layout and surrounding are in ward no.09 (Vidyaranyapura) | 100.00 |
| 11) | Improvements to Road and Drains at Thindlu and surrounding area in ward no.09 (Vidyaranyapura) | 100.00 |
| 12) | Improvements to Road and Drains at Virupakshapura and surrounding area in ward no.09 (Vidyaranyapura) | 100.0 |

. . .6/-

| | | |
|---|---|---|
| 13) | Improvements to Road and Drains at NTI layout, IECHS layout, Basavasamithi layout and surrounding area in ward no.09 (Vidyaranyapura) | 100.00 |
| 14) | Improvements to Road and Drains at Defence layout and surroundings area in ward no.09 (Vidyaranyapura) | 100.00 |
| | **Total** | **1500.00** |

**ಷರತ್ತುಗಳು:**

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಮೂಲಭೂತ ಸೌಕರ್ಯ ಮತ್ತು ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಹೆಚ್ಚುವರಿಯಾಗಿ ರೂ15.00 ಕೋಟಿಗಳ ಅಂದಾಜು ಮೊತ್ತದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು, ಅನುವು ಮಾಡಿರುವ ರೂ.15.00 ಕೋಟಿಗಳಿಗೆ ಮೀರಿದ ಯಾವುದೇ ವೆಚ್ಚ ಮತ್ತು ಟೆಂಡರ್ ಪ್ರೀಮಿಯಂಗಾಗಿ ಮಾಡುವ ವೆಚ್ಚವನ್ನು ಬಿಬಿಎಂಪಿಯು ತನ್ನ ಸ್ವಂತ ಅನುದಾನದಿಂದ ಭರಿಸತಕ್ಕದ್ದು. ಟೆಂಡರ್ ಪ್ರೀಮಿಯಂ ಮೊತ್ತವನ್ನು ಅಂದಾಜಿನಲ್ಲಿ ಅನುವು ಮಾಡತಕ್ಕದ್ದಲ್ಲ.
2. ಸದರಿ ಕಾಮಗಾರಿಗಳನ್ನು ರೂ.10.00 ಕೋಟಿಗಳಿಗೆ ಕಡಿಮೆ ಇರದಂತೆ ಪ್ಯಾಕೇಜ್ ಗಳನ್ನು ಮಾಡಿ, ಪ್ಯಾಕೇಜ್ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ ಕಾಯ್ದೆ-1999 ಮತ್ತು ಕೆ.ಟಿ.ಪಿ.ಪಿ ನಿಯಮಗಳು-2000 ಹಾಗೂ e-procurement ಮುಖಾಂತರ ಕೈಗೊಂಡು, ಟೆಂಡರ್ ಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 47 ಎಸ್.ಎಫ್.ಸಿ 2016, ಬೆಂಗಳೂರು, ದಿನಾಂಕ: 14-06-2016 ಮತ್ತು 03-11-2016 ರಂತೆ ಸಕ್ಷಮ ಪ್ರಾಧಿಕಾರದ ಅನುಮೋದನೆಯನ್ನು ಪಡೆದು, ಕಾಮಗಾರಿಗಳನ್ನು ಮುಂದಿನ ಎರಡು ವರ್ಷಗಳಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸುವುದು. ಯಾವುದೇ ಕಾಮಗಾರಿಗಳನ್ನು ವಿಭಜಿಸತಕ್ಕದ್ದಲ್ಲ.
3. ಈ ಕ್ರಿಯಾ ಯೋಜನೆಯಲ್ಲಿ ಒಳಗೊಂಡಿರುವ ಕಾಮಗಾರಿಗಳು ಇತರೆ ಯಾವುದೇ ಯೋಜನೆ / ಅನುದಾನದಡಿಯಲ್ಲಿ ಪುನರಾವರ್ತನೆಯಾಗಿರುವುದಿಲ್ಲ ಎಂಬ ಬಗ್ಗೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಪೂರ್ವಾನ್ವಯವಾಗಿ ಖಚಿತ ಪಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.
4. ಅನುಮೋದಿತ ಕ್ರಿಯಾಯೋಜನೆಯಲ್ಲಿ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳನ್ನು ಅಳವಡಿಸಿಕೊಂಡು ಟೆಂಡರ್ ಕರೆದು ಅನುಷ್ಠಾನಗೊಳಿಸುವುದು ಬಿಬಿಎಂಪಿಯ ಮುಖ್ಯ ಆಯುಕ್ತರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ. ಈ ಆದೇಶ ಹೊರಡಿಸಿದ ಒಂದು ತಿಂಗಳೊಳಗಾಗಿ

. . .7/-

ಬಿಬಿಎಂಪಿಯ ಮುಖ್ಯ ಆಯುಕ್ತರು ತಮ್ಮ ಹಂತದಲ್ಲಿ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳಾಗಿ ವಿಂಗಡಿಸಿ ಆದೇಶ ಹೊರಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.

5. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಸಂಬಂಧಪಟ್ಟ ಬಿಬಿಎಂಪಿಯ ಪ್ರಧಾನ ಅಭಿಯಂತರರು ಹಾಗೂ ಸಂಬಂಧಪಟ್ಟ ಮುಖ್ಯ ಅಭಿಯಂತರರುಗಳು ನಿಗಾವಹಿಸಿ, ಉತ್ತಮ ಗುಣಮಟ್ಟದ ಆಸ್ತಿ ಸೃಜನೆಗೆ ಕಟ್ಟುನಿಟ್ಟಿನ ಕ್ರಮ ವಹಿಸತಕ್ಕದ್ದು.

6. ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕಾಮಗಾರಿಗಳ ಗುಣಮಟ್ಟದ ಬಗ್ಗೆ ಪ್ರತಿಷ್ಠಿತ ಸಂಸ್ಥೆಗಳಿಂದ ಗುಣಮಟ್ಟದ ತಪಾಸಣಾ ಕೈಗೊಂಡು ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

7. ಈ ಆದೇಶದಲ್ಲಿ ಅನುಮೋದನೆ ನೀಡಿರುವ ಕಾಮಗಾರಿಗಳ ಅನುಷ್ಠಾನ ವೇಳಾಪಟ್ಟಿಯನ್ನು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಯಾರಿಸಿ, ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಕಾಮಗಾರಿಗಳ ಪ್ರಗತಿ ವರದಿಯನ್ನು ಪ್ರತಿ ಮಾಹೆ ಎಂಪಿಕ್ ಸಭೆಗೆ ಸರ್ಕಾರಕ್ಕೆ ತಪ್ಪದೆ ಸಲ್ಲಿಸತಕ್ಕದ್ದು.

8. ಸರ್ಕಾರವು ಅನುಮೋದನೆ ನೀಡಿರುವ ಕಾಮಗಾರಿಗಳನ್ನು ಬದಲಾವಣೆ ಮಾಡ ತಕ್ಕದ್ದಲ್ಲ. ಯಾವುದಾದರೂ ಅನುಮೋದಿತ ಕಾಮಗಾರಿಯ ಅಗತ್ಯವಿಲ್ಲವೆಂದು ಆ ನಂತರದಲ್ಲಿ ತಿಳಿದುಬಂದಲ್ಲಿ ಸಂಬಂಧಪಟ್ಟ ಅಂದಾಜು ಮೊತ್ತವನ್ನು ಉಳಿತಾಯವೆಂದು ಪರಿಗಣಿಸತಕ್ಕದ್ದು.

9. ಕರ್ನಾಟಕ ಆರ್ಥಿಕ ಸಂಹಿತೆ-1958, ಸಾಧಿಲ್ವಾರು ವೆಚ್ಚ, ಕೆಟಿಪಿಪಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಲಕ್ಷ್ಮೀಸಾಗರ್ ಎನ್.ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

24/05

**ಇವರಿಗೆ:**

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

. . .8/-

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಡಳಿತಗಾರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
6. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.